## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಂ.ಜಿ.ಮುಳೆ ರವರ ಶೂನ್ಯ ವೇಳೆ ಪ್ರಶ್ನೆಗೆ ಉತ್ತರ.

### ಪ್ರಶ್ನೆ:

ಬಿಜಾಪುರ ಜಿಲ್ಲೆಯ ಬಸವನಬಾಗೇವಾಡಿಯಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಬಡವರು ಮತ್ತು ರೈತರ ಮಕ್ಕಳು ಅಲ್ಲಿನ ಸೋಲಾರ್ ಅವ್ಯವಸ್ಥೆಯ ಪರಿಣಾಮ ಕಳೆದ ಆರು ತಿಂಗಳಿನಿಂದ ಕೊರೆಯುವ ಚಳಿಯಲ್ಲಿ ತಣ್ಣೀರು ಸ್ನಾನ ಮಾಡುತ್ತಿರುವ ಬಗ್ಗೆ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರು ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ವಿಚಾರ ದಿನಾಂಕ:08.12.2025ರ ವಿಶ್ವವಾಣಿ ದಿನಪತ್ರಿಕೆಯಲ್ಲಿ ವರದಿಯಾಗಿರುತ್ತದೆ.

ಮಕ್ಕಳಿಗೆ ಶುದ್ಧ ಕುಡಿಯುವ ನೀರಿಲ್ಲದಿರುವುದು, ಸ್ವಚ್ಛತೆ ಕಾಪಾಡದಿರುವುದು, ನೀತಿಪಾಠ ಬೋಧನ ಕೊರತೆ ಇರುವುದು ಕಂಡುಬಂದಿದ್ದು ಅಶುದ್ಧತೆಯ ಪರಿಣಾಮ ವಾಸವಿದ್ದ 30 ಮಕ್ಕಳು ಚರ್ಮರೋಗದಿಂದ ಅನಾರೋಗಕ್ಕೆ ಒಳಗಾಗಿರುತ್ತಾರೆ. ಸರ್ಕಾರ ಈ ವಸತಿ ಶಾಲೆಯಲ್ಲಿ ಇರುವಂಥ ಕುಂದುಕೊರತೆಗಳನ್ನು ಕೂಡಲೇ ಪರಿಶೀಲಿಸಿ ಅವಶ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕೆಂದು ಶೂನ್ಯ ವೇಳೆಯಲ್ಲಿ ಮಾನ್ಯ ಸಮಾಜ ಕಲ್ಯಾಣ ಸಚಿವರನ್ನು ಒತ್ತಾಯಿಸುತ್ತೇನೆ.

### ಉತ್ತರ:

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ 874 (ಪರಿಶಿಷ್ಟ ಜಾತಿ -539, ಪರಿಶಿಷ್ಟ ವರ್ಗ-156 ಹಾಗೂ ಹಿಂದುಳಿದ ವರ್ಗ-179) ವಸತಿ ಮೊರಾರ್ಜಿ ದೇಸಾಯಿ/ರಾಣಿ ಚೆನ್ನಮ್ಮ/ ಅಟಲ್ ಬಿಹಾರಿ ವಾಜಪೇಯಿ/ನವೋದಯ ವಸತಿ ಶಾಲೆಗಳು ಮಂಜೂರಾಗಿ ಕಾರ್ಯನಿರ್ವಹಿಸುತ್ತಿವೆ. ವಿಜಯಪುರ ಜಿಲ್ಲೆಯಲ್ಲಿ ಒಟ್ಟು 25 (ಪರಿಶಿಷ್ಟ ಜಾತಿ -20, ಪರಿಶಿಷ್ಟ ವರ್ಗ-03 ಹಾಗೂ ಹಿಂದುಳಿದ ವರ್ಗ-02)ವಸತಿ ಶಾಲೆ/ಕಾಲೇಜುಗಳು ಕಾರ್ಯನಿರ್ವಹಿಸುತ್ತಿವೆ.

ಸಂಘದ ಅಧೀನದಲ್ಲಿರುವ ವಸತಿ ಶಾಲೆ/ಕಾಲೇಜುಗಳಿಗೆ ಪ್ರತಿ ವರ್ಷ ಅವಶ್ಯಕವಿರುವ ಸಾಮಗ್ರಿಗಳಾದ ಪಠ್ಯಪುಸ್ತಕ, ನೋಟ್ ಪುಸ್ತಕ ಮತ್ತು ಲೇಖನ ಸಾಮಗ್ರಿಗಳು, ಸಿದ್ದಪಡಿಸಿದ ಸಮವಸ್ತ್ರ, ಶೂ, ಸಾಕ್ಸ್, ಟೈ ಮತ್ತು ಬೆಲ್ಟ್, ಶುಚಿ ಸಂಭ್ರಮ ಕಿಟ್‌ಗಳನ್ನು ಪೂರೈಸಲಾಗುತ್ತಿದೆ.

ವಿಜಯಪುರ ಜಿಲ್ಲೆಯ ವ್ಯಾಪ್ತಿಯಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆ (SC-246), ಟಕ್ಕಳಕಿ, ಬಸವನ ಬಾಗೇವಾಡಿ, ವಿಜಯಪುರ ಜಿಲ್ಲೆ ವಸತಿ ಶಾಲೆಗೆ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರು ದಿನಾಂಕ: 05.12.2025, ಶುಕ್ರವಾರದಂದು ಭೇಟಿ ನೀಡಿದ್ದು, ತೀವ್ರ ಆಕ್ಷೇಪ ವ್ಯಕ್ತಪಡಿಸಿರುವ ವಿಚಾರ ವಿಶ್ವವಾಣಿ ದಿನಪತ್ರಿಕೆಯಲ್ಲಿ ದಿನಾಂಕ:08.12.2025 ರಂದು ಪ್ರಕಟವಾಗಿರುವ ವಿಷಯಕ್ಕೆ ಸಂಬಂಧಿಸಿದಂತೆ 2025-26ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಸದರಿ ವಸತಿ ಶಾಲೆಯಲ್ಲಿ 250 ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿದ್ದು, ಸದರಿ ವಿದ್ಯಾರ್ಥಿಗಳ ಪೈಕಿ, 19 ಮಕ್ಕಳು ಚರ್ಮರೋಗದಿಂದ ಅನಾರೋಗ್ಯಕ್ಕೆ ಒಳಗಾಗಿದ್ದು, ವಿದ್ಯಾರ್ಥಿಗಳಿಗೆ ವಸತಿ ಶಾಲೆಯ ಸ್ಟಾಫ್ ನರ್ಸ್ ಮತ್ತು ಪ್ರಾಂಶುಪಾಲರು ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಿಂದ ಚಿಕಿತ್ಸೆ ಕೊಡಿಸಲಾಗಿರುತ್ತದೆ. ಈ ಪೈಕಿ, 15 ವಿದ್ಯಾರ್ಥಿಗಳು ಚರ್ಮ ರೋಗದಿಂದ ಗುಣಮುಖರಾಗಿದ್ದು, ಉಳಿದ 4 ವಿದ್ಯಾರ್ಥಿಗಳನ್ನು ಹೆಚ್ಚಿನ ಚಿಕಿತ್ಸೆಗಾಗಿ ಪೋಷಕರು ವಿದ್ಯಾರ್ಥಿಗಳನ್ನು ತಮ್ಮ ಸ್ವಗ್ರಾಮಕ್ಕೆ ಕರೆದುಕೊಂಡು ಹೋಗಿರುತ್ತಾರೆ.

ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 212 ಎಂಡಿಎಸ್ 2025 (P) ದಿನಾಂಕ:08.09.2025 ರಲ್ಲಿ ವಸತಿ ಶಾಲೆ ಕಾಲೇಜುಗಳ, ವಿದ್ಯಾರ್ಥಿನಿಲಯಗಳ ವಿದ್ಯಾರ್ಥಿಗಳಿಗೆ ವೈದ್ಯಕೀಯ ತಪಾಸಣೆ ಕುರಿತಂತೆ ನಿರ್ದೇಶನಗಳನ್ನು ನೀಡಲಾಗಿದೆ.

....2.

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಬೆಳಗಾವಿ ಕಂದಾಯ ವಿಭಾಗದ 123 ವಸತಿ ಶಾಲೆ/ಕಾಲೇಜುಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಸಕಇ 28 ಎಂಡಿಎಸ್ 2024 ದಿನಾಂಕ: 25.01.2024ರನ್ವಯ ನಿಯಮಾನುಸಾರ ಟೆಂಡರ್ ಆಹ್ವಾನಿಸಿ, ದಿನಾಂಕ:25.06.2024 ರಂದು ಸೋಲಾರ್ ವಾಟರ್ ಹೀಟರ್‌ಗಳನ್ನು ಒದಗಿಸಲು ಸರಬರಾಜು ಆದೇಶ ನೀಡಲಾಗಿರುತ್ತದೆ.

ಸದರಿ ಆದೇಶದಲ್ಲಿನ 123 ವಸತಿ ಶಾಲೆ/ಕಾಲೇಜುಗಳ ಪಟ್ಟಿಯ ಪೈಕಿ, ಮೊರಾರ್ಜಿ ದೇಸಾಯಿ ವಸತಿ ಶಾಲೆ (SC-246), ಟಕ್ಕಳಕಿ, ಬಸವನ ಬಾಗೇವಾಡಿ, ವಿಜಯಪುರ ಜಿಲ್ಲೆ ಇಲ್ಲಿಗೆ 500 ಲೀಟರ್ ಸಾಮರ್ಥ್ಯವುಳ್ಳ 04 ಸೋಲಾರ್ ವಾಟರ್ ಹೀಟರ್‌ಗಳನ್ನು ಅಳವಡಿಸಲು ಆದೇಶ ನೀಡಲಾಗಿದ್ದು, ಅದರಂತೆ ಸರಬರಾಜು ಸಂಸ್ಥೆಯವರು ಸದರಿ ವಸತಿ ಶಾಲೆಯಲ್ಲಿ 500 ಲೀಟರ್ ಸಾಮರ್ಥ್ಯವುಳ್ಳ 04 ಸೋಲಾರ್ ವಾಟರ್ ಹೀಟರ್‌ಗಳನ್ನು ಅಳವಡಿಸಿ ಬಿಸಿ ನೀರಿನ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ.

ಸದರಿ ವಸತಿ ಶಾಲೆಗೆ ಟು ಟಯರ್ ಕಾಟ್, ಡೆಸ್ಕ್ ಕಮ್ ಬೆಂಚ್, ಡೈನಿಂಗ್ ಟೇಬಲ್, ಬೆಡ್ ಶೀಟ್ ಬೆಡ್‌ಸ್ಪ್ರೇಡ್, ಟ್ರಂಕ್, ಇಡ್ಲಿ ಮಷಿನ್, ಪಾತ್ರೆ ಪರಿಕರಗಳು, ತಟ್ಟೆ-ಲೋಟ, ಶಾಲಾ ಬ್ಯಾಗ್, ನರ್ಸಿಂಗ್ ಕಿಟ್, ಸೊಳ್ಳೆ ಪರದೆ, ಕರಾಟೆ ಸಮವಸ್ತ್ರ, ಇತ್ಯಾದಿ ಸಾಮಗ್ರಿಗಳನ್ನು ಪೂರೈಸಲಾಗಿರುತ್ತದೆ.

ಮುಂದುವರೆದು, ಸದರಿ ವಸತಿ ಶಾಲೆ ಸೇರಿದಂತೆ ಹಾಸಿಗೆ ಮತ್ತು ದಿಂಬುಗಳನ್ನು ಸರಬರಾಜು ಮಾಡಲು ನಿಯಮಾನುಸಾರ ಟೆಂಡರ್ ಆಹ್ವಾನಿಸಿ ದಿನಾಂಕ: 27.10.2025 ರಂದು ಸರಬರಾಜು ಆದೇಶ ನೀಡಲಾಗಿದ್ದು, ಸರಬರಾಜು ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

ಸಕಇ 292 ಎಂಡಿಎಸ್ 2025

(ಡಾ.ಹೆಚ್.ಸಿ. ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು